ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ

ದಿನಾಂಕ : DATE : 14/07/2019

# ಗೋವಾ ಸಚಿವ ಸಂಪುಟ ವಿಸ್ತರಣೆ ನಾಲ್ವರು ಹೊಸಬರ ಸೇರ್ಪಡೆ

ವಿಶ್ವವಾಣಿ 14/7/19



**ಪಣಜಿ:** ಬಿಜೆಪಿ ನೇತೃತ್ವದ ಗೋವಾ ಸರಕಾರದ ಸಚಿವ ಸಂಪುಟವನ್ನು ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಶನಿವಾರ ವಿಸ್ತರಿಸಿದ್ದು, ಇತ್ತೀಚೆಗಷ್ಟೇ ಬಿಜೆಪಿ ಸೇರಿದ್ದ ಕಾಂಗ್ರೆಸ್‌ನ 10 ಶಾಸಕರ ಪೈಕಿ ನಾಲ್ವರನ್ನು ಸಂಪುಟಕ್ಕೆ ಸೇರಿಸಿಕೊಳ್ಳಲಾಗಿದೆ.

ರಾಜಭವನದಲ್ಲಿ ಶನಿವಾರ ನಡೆದ ಸಮಾರಂಭದಲ್ಲಿ ರಾಜ್ಯಪಾಲರಾದ ಮೃದುಲಾ ಸಿನ್ಹಾ ಪ್ರಮಾಣ ವಚನ ಬೋಧಿಸಿದರು.

ಚಂದ್ರಶೇಖರ್ ಕಾವಲ್ಕರ್, ಮೈಕಲ್ ಲೊಬೊ, ಜೆನ್ನಿಫರ್ ಮಾನ್ಸೆರಟೆ ಮತ್ತು ಫಿಲಿಪ್ ನೇರಿ ರೋಡ್ರಿಗಸ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಪ್ರಮಾಣ ವಚನ ಸ್ವೀಕಾರ ಸಮಾರಂಭದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಪ್ರಮೋದ್ ಸಾವಂತ್, ಕೇವಲ್ಕರ್ ಅವರನ್ನು ಉಪಮುಖ್ಯಮಂತ್ರಿ ಮಾಡಲಾಗುವುದು. ಸಚಿವರಿಗೆ ಶೀಘ್ರವೇ ಖಾತೆಗಳನ್ನು ಹಂಚಲಾಗುವುದು ಎಂದು ತಿಳಿಸಿದರು.

ಸಚಿವರಾಗಿದ್ದ ವಿಜಯ್ ಸರ್ದೇಸಾಯಿ, ವಿನೋದ್ ಪಲ್ಯೇಕರ್, ಜಯೇಶ್ ಸಲ್ಗೋಂಕರ್ ಮತ್ತು ರೋಹನ್ ಕೌಂಟೆ ಅವರನ್ನು ಸಂಪುಟದಿಂದ ವಜಾಗೊಳಿಸಿದ ಕೆಲವೇ ಗಂಟೆಗಳಲ್ಲಿ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆದಿದೆ.

6